# All India Radio: Bangalore
# National Bulletins In Kannada
# 21.06.2025 / 9.05 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

೧. ವಿಶ್ವದಾದ್ಯಂತ ಇಂದು ೧೧ನೇ ಅಂತಾಷ್ಟ್ರೀಯ ಯೋಗ ದಿನಾಚರಣೆ; ವಿಶಾಖಪಟ್ಟಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೨. ಅಪರೇಷನ್ ಸಿಂಧು ಅಡಿಯಲ್ಲಿ ಇರಾನ್‌ನಿಂದ ವಿಶೇಷ ವಿಮಾನದಲ್ಲಿ ಇಂದು ಭಾರತಕ್ಕೆ ಮರಳಿದ ೨೯೦ ಭಾರತೀಯರು

೩. ಭಯೋತ್ಪಾದನೆ ವಿರುದ್ಧ ಶಕ್ತಿ, ಕಾರ್ಯತಂತ್ರದಿಂದ ಭಾರತ ಬಲವಾಗಿ ಪ್ರತಿಕ್ರಿಯಿಸುತ್ತದೆ- ರಕ್ಷಣಾ ಸಚಿವ ರಾಜನಾಥ್ ಸಿಂಗ್

೪. ಡೈಮಂಡ್ ಲೀಗ್; ಪುರುಷರ ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾಗೆ ಪ್ರಥಮ ಸ್ಥಾನ

೫. ಟೆಸ್ಟ್ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ಭರ್ಜರಿ ಇನ್ನಿಂಗ್ಸ್ ಆರಂಭಿಸಿದ ಭಾರತ

**<><*<><>*><>**

ದೇಶ-ವಿದೇಶಗಳಲ್ಲಿ ಇಂದು ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ದೇಶದ ನಾನಾ ಭಾಗಗಳಲ್ಲಿ ಯೋಗ ದಿನಾಚರಣೆ ಪ್ರಯುಕ್ತ ಅನೇಕ ಕಾರ್ಯಕ್ರಮಗಳು ಜರುಗುತ್ತಿವೆ. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಇಲ್ಲಿ ಮೂರು ಲಕ್ಷಕ್ಕೂ ಹೆಚ್ಚು ಜನರು ಯೋಗಾಭ್ಯಾಸದಲ್ಲಿ ನಿರತರಾದರು.

ಈ ವೇಳೆ ಕಾರ್ಯಕ್ರಮ ಉದ್ದೇಶಿಸಿ ಪ್ರಧಾನಿ ಮಾತನಾಡಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಕೇಂದ್ರ ಆಯುಷ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಸೇರಿದಂತೆ ೧೧ ಸಾವಿರದ ೯ ನೌಕಾ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಈ ಕಾರ್ಯಕ್ರಮವು ವಿಶಾಖಪಟ್ಟಣಂನ ಆರ್.ಕೆ.ಬೀಚ್‌ನಿಂದ ಭೋಗಪುರಂವರೆಗಿನ ೨೬ ಕಿಲೋಮೀಟರ್ ವ್ಯಾಪ್ತಿಯಲ್ಲಿ ನಡೆಯಿತು. ಈ ಕರ್ಯಕ್ರಮವು, ಹೊಸ ಗಿನ್ನೆಸ್ ವಿಶ್ವ ದಾಖಲೆಯನ್ನು ಬರೆಯಿತು. ’ಯೋಗ ಸಂಗಮ’ ಉಪಕ್ರಮದಡಿಯಲ್ಲಿ ದೇಶಾದ್ಯಂತ ೧೦ ಲಕ್ಷಕ್ಕೂ ಹೆಚ್ಚು ಸ್ಥಳಗಳಲ್ಲಿ ಯೋಗ ಕಾರ್ಯಕ್ರಮ ನಡೆಯುತ್ತಿದೆ.

ನವದೆಹಲಿಯಲ್ಲಿಯೂ ಐತಿಹಾಸಿಕ ಕೆಂಪು ಕೋಟೆ ಸೇರಿದಂತೆ ರಾಷ್ಟ್ರ ರಾಜಧಾನಿಯಾದ್ಯಂತ ೧೦೯ ಸ್ಥಳಗಳಲ್ಲಿ ಯೋಗ ಕಾರ್ಯಕ್ರಮ ಆಯೋಜಿಸಲಾಗಿದೆ. ಆಯುಷ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಬೆಂಗಳೂರಿನ ವಿಧಾನಸೌಧ ಮುಂಭಾಗದಲ್ಲಿ ಆಯೋಜಿಸಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭಾಗವಹಿಸಿದ್ದರು. "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದಡಿ ಈ ವರ್ಷ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಗುತ್ತಿದೆ. ಯೋಗದ ಪ್ರಯೋಜನಗಳನ್ನು ಸಮಗ್ರವಾಗಿ ಜನರಿಗೆ ತಲುಪುವದನ್ನು ಖಚಿತಪಡಿಸಿಕೊಳ್ಳಲು, ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲಾ ಗ್ರಾಮಗಳ ಪ್ರಮುಖರಿಗೆ ಪತ್ರ ಬರೆದಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ನಿನ್ನೆ ಸಂಜೆ ಒಡಿಶಾದಲ್ಲಿ ೧೮ ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿದರು. ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ನೇತೃತ್ವದ ಬಿಜೆಪಿ ಸರ್ಕಾರ, ಒಡಿಶಾದಲ್ಲಿ ಮೊದಲ ಒಂದು ವರ್ಷ ಪೂರೈಸಿದ ಸ್ಮರಣಾರ್ಥವಾಗಿ ಭುವನೇಶ್ವರದ ಜನತಾ ಮೈದಾನದಲ್ಲಿ ಆಯೋಜಿಸಲಾಗಿದ್ದ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಅಭಿವೃದ್ಧಿ ಮಂತ್ರ ಭಾರತದ ಪ್ರಗತಿಯ ಆಧಾರವಾಗಿದೆ. ಒಡಿಶಾದ ಬಿಜೆಪಿ ಸರ್ಕಾರ ಜನಸೇವೆಗೆ ತನ್ನನ್ನು ಸಮರ್ಪಿಸಿಕೊಂಡಿದೆ. ಅಭಿವೃದ್ಧಿಯೊಂದಿಗೆ ಪರಂಪರೆಯ ರಕ್ಷಣೆ, ಧ್ಯೇಯವನ್ನು ಅಳವಡಿಸಿಕೊಂಡು ಮುನ್ನಡೆಯುತ್ತಿದೆ ಎಂದು ಹೇಳಿದರು. ದೇಶದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಪರಿವರ್ತನೆಯ ಹೊಸ ಪಯಣ ಆರಂಭವಾಗಿದೆ. ಹಲವು ದಶಕದಿಂದ ಹಿಂದುಳಿದ ಪ್ರದೇಶಗಳು ಅಭಿವೃದ್ಧಿಗೊಂಡಿವೆ ಎಂದರು. ಬುಡಕಟ್ಟು ಪ್ರದೇಶಗಳ ಸಮಗ್ರ ಅಭಿವೃದ್ಧಿ ಹಾಗೂ ಬುಡಕಟ್ಟು ಜನರ ಜೀವನ ಸುಗಮವಾಗಲು ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಪಿಎಂ ಜನಮನ ಯೋಜನೆ ಮೂಲಕ ಬುಡಕಟ್ಟು ಸಮುದಾಯಗಳಲ್ಲಿನ ಅತಿ ಹಿಂದುಳಿದ ಜಾತಿಗಳ ಜನರಿಗೆ ನೆರವು ನೀಡಲಾಗುತ್ತಿದೆ ಎಂದು ತಿಳಿಸಿದರು.

<><*<><>*><>

ಮೂರು ದಿನಗಳ ಭೇಟಿಗಾಗಿ ಡೆಹ್ರಾಡೂನ್‌ಗೆ ಆಗಮಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಎರಡನೇ ದಿನವಾದ ನಿನ್ನೆ ಡೆಹ್ರಾಡೂನ್‌ನಲ್ಲಿ ರಾಷ್ಟ್ರಪತಿ ತಪೋವನ ಮತ್ತು ರಾಷ್ಟ್ರಪತಿ ನಿಕೇತನವನ್ನು ಉದ್ಘಾಟಿಸಿದರು. ಅಲ್ಲದೇ ಸಂದರ್ಶಕರ ಸೌಲಭ್ಯ ಕೇಂದ್ರ, ಉಪಹಾರ ಗೃಹ ಸೇರಿದಂತೆ ಸಾರ್ವಜನಿಕ ಸೌಲಭ್ಯಗಳನ್ನು ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ, ರಾಷ್ಟ್ರಪತಿ ನಿಕೇತನ, ತಪೋವನ ಮತ್ತು ರಾಷ್ಟ್ರಪತಿ ಉದ್ಯಾನದ ಜೀವವೈವಿಧ್ಯತೆಯನ್ನು ಆಧರಿಸಿದ ಪುಸ್ತಕವನ್ನು ಸಹ ಬಿಡುಗಡೆಗೊಳಿಸಿದರು. ಈ ಪುಸ್ತಕವು ೩೦೦ ಕ್ಕೂ ಹೆಚ್ಚು ಸಸ್ಯಗಳು, ಚಿಟ್ಟೆಗಳು, ಪಕ್ಷಿಗಳು ಮತ್ತು ಸಸ್ತನಿಗಳು ಸೇರಿದಂತೆ ರಾಷ್ಟ್ರಪತಿ ನಿಕೇತನ, ತಪೋವನ ಮತ್ತು ಉದ್ಯಾನದ ೧೬೦ ಕ್ಕೂ ಹೆಚ್ಚು ಪ್ರಾಣಿ ಪ್ರಭೇದಗಳನ್ನು ಪಟ್ಟಿ ಮಾಡಿದೆ. ಜೂನ್ ೨೪ ರಿಂದ ರಾಷ್ಟ್ರಪತಿ ತಪೋವನವನ್ನು ಸಾರ್ವಜನಿಕರಿಗೆ ಮತ್ತು ಜುಲೈ ೧ ರಿಂದ ರಾಷ್ಟ್ರಪತಿ ನಿಕೇತನವನ್ನು ಸಾರ್ವಜನಿಕರಿಗೆ ತೆರೆಯಲಾಗುವುದು.

<><*<><>*><>

ಇರಾನ್ ತುರ್ಕಮೆನಿಸ್ತಾನದ ಅಶ್ಗಾಬತ್‌ನಿಂದ ಭಾರತೀಯರನ್ನು ಮರಳಿ ಮನೆಗೆ ಕರೆತರುವ ನಿಟ್ಟಿನಲ್ಲಿ ಆರಂಭಿಸಿರುವ ಆಪರೇಷನ್ ಸಿಂಧು ಭಾಗವಾಗಿ ವಿಶೇಷ ವಿಮಾನ ಇಂದು ಬೆಳಗಿನ ಜಾವ ನವದೆಹಲಿಗೆ ಬಂದಿಳಿದಿದೆ. ಇದರಲ್ಲಿ ೨೯೦ ಭಾರತೀಯ ಪ್ರಜೆಗಳು ನವದೆಹಲಿಗೆ ಆಗಮಿಸಿದ್ದಾರೆ. ಇದರೊಂದಿಗೆ, ಇದುವರೆಗೆ ಆಪರೇಷನ್ ಸಿಂಧು ಅಡಿಯಲ್ಲಿ ಇರಾನ್‌ನಿಂದ ೫೧೭ ಭಾರತೀಯ ಪ್ರಜೆಗಳು ಮನೆಗೆ ಮರಳಿದ್ದಾರೆ. ಇಸ್ರೇಲ್ ಮತ್ತು ಇರಾನ್ ನಡುವೆ ನಡೆಯುತ್ತಿರುವ ಸಂಘರ್ಷದಿಂದಾಗಿ ಪರಿಸ್ಥಿತಿ ಹದಗೆಡುತ್ತಿರುವ ಕಾರಣ ಇರಾನ್‌ನಿಂದ ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸುವ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ. ಕಾರ್ಯಾಚರಣೆಯ ಭಾಗವಾಗಿ, ಇರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಹೆಚ್ಚಿನ ಸಂಖ್ಯೆಯ ಭಾರತೀಯ ಪ್ರಜೆಗಳಿಗೆ ದೇಶದೊಳಗೆ ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಗೊಳ್ಳಲು ಹಾಗೂ ಲಭ್ಯವಿರುವ ಮತ್ತು ಕಾರ್ಯಸಾಧ್ಯವಾದ ಆಯ್ಕೆಗಳನ್ನು ಬಳಸಿಕೊಂಡು ಅವರನ್ನು ಸ್ಥಳಾಂತರಿಸಲು ಸಹಾಯ ಮಾಡುತ್ತಿದೆ. ಇರಾನ್‌ನಲ್ಲಿರುವ ಭಾರತೀಯ ಪ್ರಜೆಗಳು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯೊಂದಿಗೆ ಅದರ ತುರ್ತು ಸಹಾಯವಾಣಿಯ ಮೂಲಕ ಮತ್ತು ನವದೆಹಲಿಯಲ್ಲಿ ವಿದೇಶಾಂಗ ಸಚಿವಾಲಯ ಸ್ಥಾಪಿಸಿದ ದಿನದ ೨೪ ಗಂಟೆ ಕಾರ್ಯನಿರ್ವಹಿಸುತ್ತಿರುವ ನಿಯಂತ್ರಣ ಕೊಠಡಿಯೊಂದಿಗೆ ಸಂಪರ್ಕದಲ್ಲಿರಲು ಸೂಚಿಸಲಾಗಿದೆ.

<><*<><>*><>

ಇಸ್ರೇಲ್ ಜೊತೆಗಿನ ಸಂಘರ್ಷವನ್ನು ತಡೆಯಲು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಜಿನೀವಾದಲ್ಲಿ ಐರೋಪ್ಯ ರಾಷ್ಟ್ರಗಳ ವಿದೇಶಾಂಗ ಸಚಿವರನ್ನು ಭೇಟಿಯಾದರು. ಮಾತುಕತೆಯಲ್ಲಿ ಫ್ರಾನ್ಸ್, ಬ್ರಿಟನ್, ಜರ್ಮನಿ ಮತ್ತು ಐರೋಪ್ಯ ಒಕ್ಕೂಟದ ರಾಜತಾಂತ್ರಿಕ ಅಧಿಕಾರಿಗಳು ಭಾಗವಹಿಸಿದ್ದರು. ಇರಾನ್ ಮೇಲಿನ ದಾಳಿಯನ್ನು ಬೆಂಬಲಿಸಬೇಕೆ ಅಥವಾ ಬೇಡವೇ ಎಂಬುದನ್ನು ಎರಡು ವಾರಗಳಲ್ಲಿ ನಿರ್ಧರಿಸಬಹುದು ಎಂಬ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಯ ನಂತರ ಈ ಸಭೆ ನಡೆದಿದೆ. ಮಾತುಕತೆಗಳಿಗೆ ಇರಾನ್ ಮರಳಲು ಮತ್ತು ದಾಳಿ ತೀವ್ರಗೊಳ್ಳುವುದನ್ನು ತಪ್ಪಿಸಲು ಐರೋಪ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಒತ್ತಾಯಿಸಿದರು.

<><*<><>*><>

ಭಯೋತ್ಪಾದಕರು ಮತ್ತು ಅವರ ಪೋಷಕರಿಗೆ ನವ ಭಾರತ ಇನ್ನು ಮುಂದೆ ಭಯೋತ್ಪಾದನೆಗೆ ಬಲಿಪಶುವಾಗುವುದಿಲ್ಲ. ಬದಲಿಗೆ ಶಕ್ತಿ ಮತ್ತು ಕಾರ್ಯತಂತ್ರದಿಂದ ಪ್ರತಿಕ್ರಿಯಿಸುತ್ತದೆ ಎಂಬ ಪ್ರಬಲ ಸಂದೇಶವನ್ನು ಆಪರೇಷನ್ ಸಿಂದೂರ ರವಾನಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಉಧಮ್‌ಪುರದ ಉತ್ತರ ಕಮಾಂಡ್‌ನಲ್ಲಿರುವ ಸೈನಿಕರೊಂದಿಗೆ ನಿನ್ನೆ ಸಂವಹನ ನಡೆಸಿದ ರಕ್ಷಣಾ ಸಚಿವರು, ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಪ್ರದೇಶದಲ್ಲಿ ಭಯೋತ್ಪಾದಕ ಮೂಲಸೌಕರ್ಯಗಳನ್ನು ನಾಶಮಾಡುವಲ್ಲಿ ಸಶಸ್ತ್ರ ಪಡೆಗಳು ಮತ್ತು ಗುಪ್ತಚರ ಸಂಸ್ಥೆಗಳ ನಿಖರತೆ, ಸಮನ್ವಯ ಮತ್ತು ಧೈರ್ಯವನ್ನು ಶ್ಲಾಘಿಸಿದರು. ಭಯೋತ್ಪಾದನೆಯ ಬಗ್ಗೆ ಭಾರತದ ನೀತಿಯಲ್ಲಿನ ಬದಲಾವಣೆಯು ಈ ಅಪ್ರತಿಮ ಶೌರ್ಯ ಮತ್ತು ಸಮರ್ಪಣೆಯ ಪರಿಣಾಮವಾಗಿದೆ ಎಂದು ಅವರು ಪ್ರತಿಪಾದಿಸಿದರು. ಆಪರೇಷನ್ ಸಿಂದೂರ ಕೇವಲ ಮಿಲಿಟರಿ ಕ್ರಮವಲ್ಲ. ಆದರೆ ಗಡಿಯಾಚೆಗಿನ ಭಯೋತ್ಪಾದಕರು ಮತ್ತು ಭಯೋತ್ಪಾದನೆಯನ್ನು ಬೆಂಬಲಿಸುವವರಿಗೆ ಎಚ್ಚರಿಕೆಯಾಗಿದೆ.

ಆಪರೇಷನ್ ಸಿಂದೂರ ಇನ್ನೂ ಮುಗಿದಿಲ್ಲ ಮತ್ತು ಇದು ಕೇವಲ ಅಲ್ಪವಿರಾಮವಷ್ಟೇ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

**<><*<><>*><>**

ಭಾರತದ ಜಾವೆಲಿನ್ ಆಟಗಾರ ನೀರಜ್ ಚೋಪ್ರಾ ನಿನ್ನೆ ರಾತ್ರಿ ಸ್ಟೇಡ್ ಸೆಬಾಸ್ಟಿಯನ್ ಚಾರ್ಲೆಟಿಯಲ್ಲಿ ನಡೆದ ಪ್ಯಾರಿಸ್ ಡೈಮಂಡ್ ಲೀಗ್ ೨೦೨೫ ರ ಪುರುಷರ ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ನೀರಜ್ ಚೋಪ್ರಾ ಮೊದಲ ಎಸೆತದಲ್ಲೇ ೮೮.೧೬ ಮೀಟರ್ ದೂರ ಎಸೆದು ಅತ್ಯುತ್ತಮ ಪ್ರಯತ್ನ ಮಾಡುವ ಮೂಲಕ ಪ್ರಶಸ್ತಿಯನ್ನು ಗೆದ್ದರು. ಜರ್ಮನಿಯ ಜೂಲಿಯನ್ ವೆಬರ್ ೮೭.೮೮ ಮೀಟರ್ ಎಸೆತದೊಂದಿಗೆ ಎರಡನೇ ಸ್ಥಾನ ಪಡೆದರು. ಬ್ರೆಜಿಲ್‌ನ ಲೂಯಿಜ್ ಮೌರಿಸಿಯೊ ಡ ಸಿಲ್ವಾ ೮೬.೬೨ ಮೀಟರ್ ದೂರ ಎಸೆದು ಮೂರನೇ ಸ್ಥಾನ ಪಡೆದರು.

**<><*<><>*><>**

ಇಂಗ್ಲೆಂಡ್‌ನ ಲೀಡ್ಸ್‌ನ ಹೆಡಿಂಗ್ಲೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ತೆಂಡಲ್ಕೂರ್- ಆಂಡರ್ಸನ್ ಟ್ರೋಫಿ ಟೆಸ್ಟ್ ಕ್ರಿಕೆಟ್‌ನ ೫ ಪಂದ್ಯಗಳ ಸರಣಿಯ ಮೊದಲ ಪಂದ್ಯದಲ್ಲಿ ಟಾಸ್ ಸೋತು ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ, ನಿನ್ನೆ ಮೊದಲ ದಿನದ ಅಂತ್ಯದ ವೇಳೆಗೆ ೩ ವಿಕೆಟ್ ನಷ್ಟಕ್ಕೆ ೩೫೯ ರನ್ ಮಾಡಿದೆ. ಯಶಸ್ವಿ ಜೈಸ್ವಾಲ್ ೧೦೧ ರನ್ ಗಳಿಸಿ, ಸ್ಟೋಕ್ಸ್ ಬೌಲಿಂಗ್‌ನಲ್ಲಿ ಔಟಾದರು. ಶುಭಮನ್ ಗಿಲ್ ೧೨೭ ರನ್ ಹಾಗೂ ರಿಶಭ್ ಪಂತ್ ೬೫ ರನ್ ಮಾಡಿದ್ದು, ಕಣದಲ್ಲಿದ್ದಾರೆ. ಇಂದು ಎರಡನೇ ದಿನದಾಟ ಮುಂದುವರಿಯಲಿದೆ.

**<><*<><>*><>**

ಮಹಾರಾಷ್ಟ್ರದ ಪ್ರಮುಖ ಬಂದರು ಯೋಜನೆಗಳನ್ನು ವೇಗವಾಗಿ ಪೂರ್ಣಗೊಳಿಸಲು ಕೇಂದ್ರ ಹಾಗೂ ರಾಜ್ಯ ಇಲಾಖೆಗಳ ನಡುವಿನ ಸಮನ್ವಯ ಅಗತ್ಯವಿದೆ ಎಂದು ಕೇಂದ್ರ ಬಂದರು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ.ಮುಂಬೈನಲ್ಲಿ ನಿನ್ನೆ ನಡೆದ ಬಂದರು ಹಾಗೂ ಕರಾವಳಿ ಅಭಿವೃದ್ಧಿಯ ಕುರಿತ ಕೇಂದ್ರ ಮತ್ತು ರಾಜ್ಯ ಅಧಿಕಾರಿಗಳ ಸಮನ್ವಯ ಸಭೆಗೆ ಅಧ್ಯಕ್ಷತೆ ವಹಿಸಿದ್ದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ<>*><>**